# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಪರಂಪರಾಗತ ಕೃಷಿ ವಿಕಾಸ ಯೋಜನೆಯ ಅನುಷ್ಠಾನಕ್ಕೆ 2019-20ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 55 ಕೃಉಇ 2019, ದಿನಾಂಕ: 31.08.2019.

2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 9-32/2015-Org.FMG (i) (ii) (iii), ದಿನಾಂಕ: 30.09.2019.

3. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಉಕೃನಿ/ಸಾಕೃಘ/PKVY/ಅ.ಬಿ/2019-20, ದಿನಾಂಕ: 24.10.2019.

*****

ಪ್ರಸ್ತಾವನೆ:

2019-20ನೇ ಸಾಲಿನ ಆಯವ್ಯಯ ಸಂಪುಟ-3 ರಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆ ಲೆಕ್ಕ ಶೀರ್ಷಿಕೆ: 2401-00-108-1-16 ಉಪ ಲೆಕ್ಕ ಶೀರ್ಷಿಕೆ 059 ಅಡಿ ಪರಂಪರಾಗತ ಕೃಷಿ ವಿಕಾಸ ಯೋಜನೆ ಕಾರ್ಯಕ್ರಮಕ್ಕಾಗಿ ಒಟ್ಟು ರೂ.1734.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1) ರ ಪತ್ರದಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agricultre" (NMSA) ಯೋಜನೆಯಡಿಯ ಪರಂಪರಾಗತ ಕೃಷಿ ವಿಕಾಸ ಯೋಜನೆ (PKVY) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 2401-00-108-1-16 ಉ.ಲೆ.ಶೀ 059 ರಡಿ ಈಗಾಗಲೇ ರೂ.707.39 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರಗಳಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಪರಂಪರಾಗತ ಕೃಷಿ ವಿಕಾಸ ಯೋಜನೆ (PKVY) ಕಾರ್ಯಕ್ರಮದಡಿ 2019-20ನೇ ಸಾಲಿನ ಮೊದಲನೇ ಕಂತಿನ, ಕೇಂದ್ರದ ಪಾಲಿನ ಅನುದಾನ ರೂ.80.466 ಲಕ್ಷಗಳು ರಾಜ್ಯಕ್ಕೆ ಬಿಡುಗಡೆಯಾಗಿರುತ್ತದೆ.

ಮೇಲೆ ಓದಲಾದ (3)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಪರಂಪರಾಗತ ಕೃಷಿ ವಿಕಾಸ ಯೋಜನೆ (PKVY) ಕಾರ್ಯಕ್ರಮದಡಿ ಮೀಸಲಿರಿಸಲಾದ ಅನುದಾನವಾದ ರೂ.1734.00 ಲಕ್ಷಗಳಲ್ಲಿ ರೂ.707.39 ಲಕ್ಷಗಳನ್ನು ತೋಟಗಾರಿಕೆ ಇಲಾಖೆಯ ಮುಖಾಂತರ ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದ್ದು, ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಒಟ್ಟು ರೂ.80.466 ಲಕ್ಷಗಳ ಅನುದಾನಕ್ಕೆ ರಾಜ್ಯದ ಶೇ. 40 ಪಾಲು ರೂ.53.644 ಲಕ್ಷಗಳನ್ನು ಸೇರಿಸಿ ಒಟ್ಟು ರೂ.134.11 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 72 ಕೃಉಇ 2019, ಬೆಂಗಳೂರು, ದಿನಾಂಕ: 02.12.2019.**

ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಪರಂಪರಾಗತ ಕೃಷಿ ವಿಕಾಸ ಯೋಜನೆ (PKVY) ಕಾರ್ಯಕ್ರಮದಡಿ ಮೀಸಲಿರಿಸಲಾದ ಅನುದಾನವಾದ ರೂ.1734.00 ಲಕ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಒಟ್ಟು ರೂ.80.466 ಲಕ್ಷಗಳ ಅನುದಾನಕ್ಕೆ ರಾಜ್ಯದ ಶೇ. 40 ಪಾಲು ರೂ.53.644 ಲಕ್ಷಗಳು ಸೇರಿಸಿ ಒಟ್ಟು ರೂ.134.11 ಲಕ್ಷಗಳನ್ನು 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-108-1-16 ರ ಅಡಿ ಈ ಕೆಳಕಂಡಂತೆ ಬಿಡುಗಡೆ ಮಾಡುತ್ತಾ, ಕಾರ್ಯಕ್ರಮವನ್ನು ತೋಟಗಾರಿಕೆ ಇಲಾಖೆಯ ಮುಖಾಂತರ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ರೂ. ಲಕ್ಷಗಳಲ್ಲಿ

| ಕ್ರ. ಸಂ | ಘಟಕ | ಬಿಡುಗಡೆಯಾಗಿರು ಕೇಂದ್ರದ ಪಾಲು (60%) | ಕೇಂದ್ರದ ಪಾಲಿನ ಅನುದಾನಕ್ಕೆ ಅನುಗುಣವಾಗಿ ಅವಶ್ಯವಿರುವ ರಾಜ್ಯದ ಪಾಲು (40%) | ಒಟ್ಟು |
|---|---|---|---|---|
| 1 | ಸಾಮಾನ್ಯ | 60.34950 | 40.2330 | 100.58250 |
| 2 | ವಿಶೇಷ ಘಟಕ ಯೋಜನೆ | 14.48388 | 9.65592 | 24.13980 |
| 3 | ಗಿರಿಜನ ಉಪಯೋಜನೆ | 5.63262 | 3.75508 | 9.38770 |
| | **ಒಟ್ಟು** | **80.46600** | **53.64400** | **134.11000** |

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 04.07.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 53 ಆಂ.ಆ.ಸ 2019, ದಿನಾಂಕ: 13.11.2019ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.